ವಿಷಯ ಸಂಖ್ಯೆ: (13)

ವಿಷಯ: ವಿಭಿನ್ನ ಸಾಮರ್ಥ್ಯವುಳ್ಳ ವಿದ್ಯಾರ್ಥಿಗಳಿಗೆ (Differently Abled) ಪದವಿ ಪರೀಕ್ಷೆಗಳಲ್ಲಿ ವಿಶೇಷ ಸೌಲಭ್ಯಗಳನ್ನು ನೀಡುವ ಕುರಿತು.

ಉಲ್ಲೇಖ: 1) Letter dated: 28.03.2017 of General Secretary of National Federation of the Blind, Bangalore.

2) ಸರ್ಕಾರದ ಪ್ರಧಾನ ಕಾರ್ಯದರ್ಶಿಗಳ ಪತ್ರ ಸಂಖ್ಯೆ. ಇಡಿ 213 ಯುಎನ್ಇ 2017,ದಿನಾಂಕ:18.05.2017.

3) Office Memorandum No. F.No.16-110/2003-DD. III, dated:26.02.2013 by the Government of India, Ministry of Social Justice and Empowerment, Department of Disability of Affairs).

__ಪ್ರಸ್ತಾವನೆ:__

ವಿಭಿನ್ನ ಸಾಮರ್ಥ್ಯವುಳ್ಳ ವಿದ್ಯಾರ್ಥಿಗಳಿಗೆ (Differently Abled) ಪದವಿ ಪರೀಕ್ಷೆಗಳಲ್ಲಿ ವಿಶೇಷ ರಿಯಾಯತಿ ಮತ್ತು ಸೌಲಭ್ಯಗಳನ್ನು ನೀಡುವ ಕುರಿತು, ಜನರಲ್ ಸೆಕ್ರೆಟರಿ, ನ್ಯಾಷನಲ್ ಫೆಡರೇಷನ್ ಆಫ್ ದಿ ಬ್ಲೈಂಡ್ ಇವರು ಪ್ರಧಾನ ಕಾರ್ಯದರ್ಶಿಗಳಿಗೆ ದಿನಾಂಕ: 28.03.2017 ರಂದು ಪತ್ರ ಬರೆದಿರುತ್ತಾರೆ.

ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಉನ್ನತ ಶಿಕ್ಷಣ ಇಲಾಖೆ, ಇವರು ಉಲ್ಲೇಖಿತ ಪತ್ರದ ಪ್ರತಿಯನ್ನು ಲಗತ್ತಿಸಿ ಪದವಿ ಪರೀಕ್ಷೆಗಳಲ್ಲಿ ವಿಶೇಷ ಸೌಲಭ್ಯಗಳನ್ನು ಏರ್ಪಡಿಸುವ ಕುರಿತಂತೆ ಕೇಂದ್ರ ಸಾಮಾಜಿಕ ನ್ಯಾಯ ಮತ್ತು ಸಬಲೀಕರಣ, ಮಂತ್ರಾಲಯವು ಅಧಿಕೃತ ಜ್ಞಾಪನ ಪತ್ರದೊಂದಿಗೆ ಮಾರ್ಗಸೂತ್ರಗಳನ್ನು ಹೊರಡಿಸಿರುತ್ತಾರೆ. ಸದರಿ ಮಾರ್ಗಸೂಚಿಗಳ ಪ್ರತಿಯನ್ನು ಈ ಟಿಪ್ಪಣಿಯೊಂದಿಗೆ ಲಗತ್ತಿಸಲಾಗಿದೆ. (Uniform and Comprehensive Guidelines for conducting examination for the persons with disabilities as issued Office Memorandum No. F.No.16-110/2003-DD. III, dated:26.02.2013 by the Government of India, Ministry of Social Justice and Empowerment, Department of Disability of Affairs).

1. ಕರ್ನಾಟಕ ಸರ್ಕಾರ, ಉನ್ನತ ಶಿಕ್ಷಣ ಇಲಾಖೆಯ ಸುತ್ತೋಲೆ ಸಂಖ್ಯೆ. ಇಡಿ 15 ಯುಎನ್ಇ 2004, ದಿನಾಂಕ:05.03.2004 ರಂದು ಪದವಿ ಪರೀಕ್ಷೆ ಮತ್ತು ಸ್ನಾತಕೋತ್ತರ ಪರೀಕ್ಷೆ ಬರೆಯುವ ದೃಷ್ಟಿ ದೋಷವುಳ್ಳ ವಿದ್ಯಾರ್ಥಿಗಳು ತಮಗೆ ಇಚ್ಛೆವುಳ್ಳ, ವಿದ್ಯಾರ್ಹತೆ ಮಿತಿಗೆ ಒಳಪಡದಂತಹ ಬರಹಗಾರರನ್ನು ಉಪಯೋಗಿಸಿಕೊಳ್ಳಲು ಅನುಮತಿ ನೀಡುವಂತೆ ಆಯುಕ್ತರು, ಅಂಗವಿಕಲರ ಅಧಿನಿಯಮ 1995, ಬೆಂಗಳೂರು, ಈ ಪ್ರಸ್ತಾವನೆಯನ್ನು ಪರಿಗಣಿಸಿ ದೃಷ್ಟಿ ದೋಷವುಳ್ಳ ವಿದ್ಯಾರ್ಥಿಗಳು ಪದವಿ ಪರೀಕ್ಷೆಯನ್ನು ಬರೆಯಲು ಬರಹಗಾರರನ್ನು ಉಪಯೋಗಿಸಿಕೊಳ್ಳಲು ಈ ಕೆಳಕಂಡ ಷರತ್ತುಗಳೊಂದಿಗೆ ಅನುಮತಿಸಲಾಗಿದೆ.
   a. The blind student may select the scribe.
   b. That the scribe need not have lower qualification than the student, provided that the scribe should not have the qualification (with the same optional and languages) pertaining to examination which the student is writing.

2. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಶಿಕ್ಷಣ ಇಲಾಖೆ, ಇವರು ತಮ್ಮ ಸುತ್ತೋಲೆ ಸಂಖ್ಯೆ. ಇಡಿ 15 ಯುಎಸ್ಇ 2004. ದಿನಾಂಕ: 22.03.2004 ರನ್ವಯ ಈ ಕೆಳಗಿನಂತೆ ಪದವಿ ಮತ್ತು ಸ್ನಾತಕೋತ್ತರ ಪರೀಕ್ಷೆ ಬರೆಯುವ ದೃಷ್ಟಿದೋಷವುಳ್ಳ ವಿದ್ಯಾರ್ಥಿಗಳು ತಮಗೆ ಇಚ್ಛೆವುಳ್ಳ, ವಿದ್ಯಾರ್ಹತೆ ಮಿತಿಗೆ ಒಳಪಡದಂತಹ ಬರಹಗಾರರನ್ನು ಉಪಯೋಗಿಸಿಕೊಳ್ಳಲು ಅನುಮತಿ ನೀಡುವ ಬಗ್ಗೆ ಹೊರಡಿಸಲಾದ ಇಡಿ 15 ಯುಎನ್ಇ 2004, ದಿನಾಂಕ: 11.03.2004 ರ ಸುತ್ತೋಲೆಯ ಮುಂದುವರಿಕೆಯಾಗಿ ಈ ಕೆಳಗಿನಂತೆ ನಿರ್ದೇಶನಗಳನ್ನು ನೀಡಲಾಗಿದೆ.

1 ಅಂಗವಿಕಲರು ಮತ್ತು ದೃಷ್ಟಿದೋಷವುಳ್ಳ ವಿದ್ಯಾರ್ಥಿಗಳು ಬರಹಗಾರರ ಸಹಾಯಕ್ಕಾಗಿ ಮುಂಚಿತವಾಗಿ ತಾವು ಓದುತ್ತಿರುವ ಕಾಲೇಜಿನ ಪ್ರಾಂಶುಪಾಲರಿಗೆ ಅರ್ಜಿ ಸಲ್ಲಿಸಿ ಅನುಮತಿಯನ್ನು ಪಡೆದುಕೊಂಡಿರತಕ್ಕದ್ದು ಮತ್ತು ಈ ಕೋರಿಕೆ ಜೊತೆಗೆ ಅಂಗವಿಕಲತೆಯ ಬಗ್ಗೆ ವೈದ್ಯಕೀಯ ಪ್ರಮಾಣ ಪತ್ರವನ್ನು ಲಗತ್ತಿಸತಕ್ಕದ್ದು.

ಪು.ತಿ.ನೋ

2 ಬರಹಗಾರರ ಸಹಾಯವನ್ನು ಪಡೆದುಕೊಳ್ಳಲು ಇಚ್ಛಿಸುವ ವಿದ್ಯಾರ್ಥಿಗಳು ಪರೀಕ್ಷಾ ವೇಳೆಗಿಂತ ಒಂದು ಗಂಟೆ ಮುಂಚಿತವಾಗಿ ಬರಹಗಾರರ ವಿವರಗಳನ್ನು ಕಾಲೇಜಿನ ಪ್ರಾಂಶುಪಾಲರಿಗೆ ತಿಳಿಸಿ ಪೂರ್ವಾನುಮತಿ ಪಡೆಯುವುದು.

3 ಬರಹಗಾರರ ವಿದ್ಯಾರ್ಹತೆಯು ಅಂಗವಿಕಲ ಮತ್ತು ದೃಷ್ಟಿದೋಷವುಳ್ಳ ವಿದ್ಯಾರ್ಥಿಗಳಿಗಿಂತ ಕಡಿಮೆ ವಿದ್ಯಾರ್ಹತೆ ಇರಬೇಕೆಂಬುದಾಗಿ ಏನೂ ಇಲ್ಲ. ಬರಹಗಾರರ ವಿದ್ಯಾರ್ಹತೆಯು ಹೆಚ್ಚಿಗೆ ಇದ್ದರೂ ಸಹ, ಅದು ಅಂಗವಿಕಲ ಮತ್ತು ದೃಷ್ಟಿದೋಷವುಳ್ಳ ವಿದ್ಯಾರ್ಥಿಗಳು ತೆಗೆದುಕೊಳ್ಳುತ್ತಿರುವ ಪರೀಕ್ಷೆಯಲ್ಲಿನ ವಿಷಯಗಳು ಒಂದೇ ಆಗಿರಬಾರದು. ಉದಾಹರಣೆ ಒಬ್ಬ ಬಿ.ಎ ಅಥವಾ ಎಂ.ಎ ವಿದ್ಯಾರ್ಹತೆ ಹೊಂದಿರತಕ್ಕ ಬರಹಗಾರನು ಬಿ.ಎಸ್ಸಿ, ಪರೀಕ್ಷೆ ತೆಗೆದುಕೊಳ್ಳುತ್ತಿರುವ ಅಂಗವಿಕಲ ಮತ್ತು ದೃಷ್ಟಿದೋಷವುಳ್ಳ ವಿದ್ಯಾರ್ಥಿಗೆ ಬರಹಗಾರನಾಗಬಹುದು.

4 ಯಾವುದಾದರೂ ಒಂದು ಅಥವಾ ಹೆಚ್ಚಿನ ಅಂಗವಿಕಲತೆಯ ತೊಂದರೆಯಿಂದ ನರಳುತ್ತಿರುವ ಹಾಗೂ ದೃಷ್ಟಿ ಹಾಗೂ ಶ್ರವಣ ವೈಫಲ್ಯತೆ ಇರುವ ಅಭ್ಯರ್ಥಿಗಳಿಗೆ ಹೆಚ್ಚಿನ ಸಮಯಾವಕಾಶ ನೀಡುವುದು ಅಗತ್ಯವಾಗಿರುತ್ತದೆ. ಮೂರು ಗಂಟೆಯ ಅವಧಿಯ ಪ್ರಶ್ನೆ ಪತ್ರಿಕೆಗೆ ಗಂಟೆಗೆ 20 ನಿಮಿಷಗಳಂತೆ ಒಂದು ಗಂಟೆ ಹೆಚ್ಚಿನ ಸಮಯಾವಕಾಶ ನೀಡುವುದು. ಈ ಸೌಲಭ್ಯವನ್ನು ಬರಹಗಾರರ ಸೌಲಭ್ಯಗಳನ್ನು ಉಪಯೋಗಿಸಿಕೊಳ್ಳುವ ವಿದ್ಯಾರ್ಥಿಗಳಿಗೂ ಕೂಡ ಒದಗಿಸುವುದು.

5 ಶ್ರವಣ ದೋಷವುಳ್ಳ ವಿದ್ಯಾರ್ಥಿಗಳಿಗೆ ಭಾಷಾ ಸಮಸ್ಯೆ ಇರುವುದರಿಂದ ಬರೆಯುವಲ್ಲಿ ವ್ಯಾಕರಣ, ವಾಕ್ಯ ರಚನಾ ದೋಷಗಳು ಆಗುವ ಸಂಭವ ಇರುವುದನ್ನು ಪರಿಗಣಿಸಿ ಉತ್ತರ ಪತ್ರಿಕೆಯ ಮೌಲ್ಯ ಮಾಪಕರು ಅಂಥ ವಿದ್ಯಾರ್ಥಿಗಳ ಉತ್ತರ ಪತ್ರಿಕೆಯನ್ನು ಗುರುತಿಸಿ, ತಾಳ್ಮೆಯಿಂದ ಮೌಲ್ಯಮಾಪನ ಮಾಡಲು ಅನುಕೂಲವಾಗುವಂತೆ ಶ್ರವಣ ದೋಷವುಳ್ಳ ವಿದ್ಯಾರ್ಥಿಗಳ ಉತ್ತರ ಪತ್ರಿಕೆಗಳಿಗೆ ಹಸಿರು ಬಣ್ಣದ ಸ್ಟಿಕರ್ ಅಂಟಿಸುವಲ್ಲಿ ಕ್ರಮ ತೆಗೆದುಕೊಳ್ಳುವುದು.

ಈ ಅಧಿಕೃತ ಜ್ಞಾಪನ ಪತ್ರದಲ್ಲಿ ತಿಳಿಸಿರುವ ಮಾರ್ಗಸೂಚಿಗಳನ್ನು ರಾಜ್ಯದ ಎಲ್ಲಾ ವಿಶ್ವವಿದ್ಯಾಲಯಗಳು ಅಳವಡಿಸುವ ಅವಶ್ಯಕತೆ ಇರುವ ಬಗ್ಗೆ ವಿಷಯವನ್ನು ಪರಿಷತ್ತಿನ ಸಾಮಾನ್ಯ ಸಭೆಯಲ್ಲಿ ಮಂಡಿಸಿ ಸಲಹೆಸೂಚನೆ/ ಮಾರ್ಗಸೂಚಿಗಳನ್ನು ಸರ್ಕಾರಕ್ಕೆ ಕಳುಹಿಸುವಂತೆ ಕೋರಿರುತ್ತಾರೆ.

ಸದರಿ ವಿಷಯದ ಬಗ್ಗೆ ಸಭೆಯ ಈ ಕೆಳಗಿನಂತೆ ನಿರ್ಣಯಿಸಲಾಯಿತು.

## ನಿರ್ಣಯ

ವಿಭಿನ್ನ ಸಾಮರ್ಥ್ಯವುಳ್ಳ ವಿದ್ಯಾರ್ಥಿಗಳಿಗೆ (Differently Abled) ಪದವಿ ಪರೀಕ್ಷೆಗಳಲ್ಲಿ ವಿಶೇಷ ಸೌಲಭ್ಯಗಳನ್ನು ನೀಡುವ ಕುರಿತು ಕೇಂದ್ರ ಸಾಮಾಜಿಕ ನ್ಯಾಯ ಮತ್ತು ಸಬಲೀಕರಣ, ಮಂತ್ರಾಲಯವು ಹೊರಡಿಸಿರುವ ಮಾರ್ಗಸೂಚಿಗಳನ್ನು ರಾಜ್ಯದ ಎಲ್ಲಾ ವಿಶ್ವವಿದ್ಯಾಲಯಗಳು ಅಳವಡಿಸಿಕೊಳ್ಳುವಂತೆ ಸಭೆಯಲ್ಲಿ ಸೂಚಿಸಲಾಯಿತು.

Executive Director
Karnataka State Higher Education Council